## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1014(1158) |
| ಸದಸ್ಯರ ಹೆಸರು | : | ಶ್ರೀ ಕೆ.ಎಸ್.ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 22-09-2022. |
| ಉತ್ತರಿಸುವವರು | : | ಮಾನ್ಯ ಮುಖ್ಯಮಂತ್ರಿಯವರು |

| ಕ್ರ.ಸಂ. | ಪ್ರಶ್ನೆಗಳು | ಉತ್ತರ |
|---|---|---|
| (ಅ) | ಪ್ರಸ್ತುತವಿರುವ ರಾಜ್ಯದ ಗ್ರಾಮ ಪಂಚಾಯಿತಿ ಸದಸ್ಯರ ಗೌರವಧನವನ್ನು ಹೆಚ್ಚಿಸುವ ಬಗ್ಗೆ ಸರ್ಕಾರದ ಕ್ರಮವೇನು; | ರಾಜ್ಯದ ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರುಗಳ ಮಾಸಿಕ ಗೌರವಧನ ಹೆಚ್ಚಳ ಮಾಡುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ. |
| (ಆ) | ಗ್ರಾಮಪಂಚಾಯಿತಿ ಕಾರ್ಯಾಲಯದ ಉನ್ನತೀಕರಣದೊಂದಿಗೆ ಅಧಿಕಾರಿ ವರ್ಗ ಜನಸ್ನೇಹಿಯಾಗಿ ಕಾರ್ಯನಿರ್ವಹಿಸುವಂತೆ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು? | ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಪ್ರತಿ ತಿಂಗಳು ಒಂದು ದಿನ ಕಡ್ಡಾಯವಾಗಿ ಸಭೆಯನ್ನು ಏರ್ಪಡಿಸಿ ಪ್ರಗತಿ ಪರಿಶೀಲಿಸಿ ಸಮಸ್ಯೆಯನ್ನು ಬಗೆಹರಿಸುವಲ್ಲಿ ಅಗತ್ಯ ಕ್ರಮ ತೆಗೆದುಕೊಳ್ಳುವಂತೆ ತಿಳಿಸಲಾಗಿದೆ.<br>ಮುಂದುವರೆದು ಜಿಲ್ಲಾ ಪಂಚಾಯತಿಗಳ ಅಧಿಕಾರಿಗಳು ತ್ರೈಮಾಸಿಕವಾಗಿ ಗ್ರಾಮ ಪಂಚಾಯತಿ ಅಧ್ಯಕ್ಷರ ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಸಭೆಯನ್ನು ಕರೆದು ಪ್ರಗತಿ ಪರಿಶೀಲನೆ, ಮಾಹಿತಿ-ತಿಳುವಳಿಕೆ ನೀಡುವುದು ಹಾಗೂ ಕೆಳಸ್ಥರದ ಎಲ್ಲಾ ಅಧಿಕಾರಿಗಳಿಗೆ ಮನೋಸ್ಥೈರ್ಯ ತುಂಬುವಂತೆ ಸಭೆಯನ್ನು ನಡೆಸಲು ಈಗಾಗಲೇ ನಿರ್ದೇಶನ ನೀಡಲಾಗಿದೆ. |

**ಸಂಖ್ಯೆ: ಗ್ರಾಅಪಂರಾ 421 ಜಿಪಸ 2022**

(ಬಸವರಾಜ ಬೊಮ್ಮಾಯಿ)

ಮುಖ್ಯಮಂತ್ರಿ